# ಕರ್ನಾಟಕ ಲೋಕಸೇವಾ ಆಯೋಗ

ಸಂಖ್ಯೆ:ಪಿಎಸ್‌ಸಿ 93 ಇಎಸ್‌ಟಿ/2023-24/1411

ಲೋಕಸೇವಾ ಆಯೋಗದ ಕಚೇರಿ,
" ಉದ್ಯೋಗ ಸೌಧ ",
ಬೆಂಗಳೂರು, ದಿನಾಂಕ:15-11-2023.

## ಅಧಿಸೂಚನೆ

**ವಿಷಯ:** ಕರ್ನಾಟಕ ಲೋಕಸೇವಾ ಆಯೋಗದಲ್ಲಿನ ಕಾನೂನು ಕೋಶದ ಮುಖ್ಯಸ್ಥರ ಹುದ್ದೆಗೆ ಕಾನೂನು ಸಲಹೆಗಾರರನ್ನು (Legal Adviser) ನೇಮಕಾತಿ ಮಾಡಿಕೊಳ್ಳುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 64 ಸೇಲೋಸೇ 93, ದಿ:21-07-1994.

******

ಉಲ್ಲೇಖಿತ ಸರ್ಕಾರದ ಆದೇಶದನ್ವಯ ಕರ್ನಾಟಕ ಲೋಕಸೇವಾ ಆಯೋಗದ ಕಛೇರಿಯ ಕಾನೂನು ಕೋಶದ ಮುಖ್ಯಸ್ಥರ ಹುದ್ದೆಯನ್ನು ನೇಮಕ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿರುವ ಹಿನ್ನೆಲೆಯಲ್ಲಿ ಎರಡು ವರ್ಷಗಳ ಅವಧಿಗೆ "ಕಾನೂನು ಕೋಶದ ಮುಖ್ಯಸ್ಥ"ರ ಹುದ್ದೆಗೆ ಕಾನೂನು ಸಲಹೆಗಾರರನ್ನು (Legal Adviser) ನೇಮಕ ಮಾಡಿಕೊಳ್ಳಲು ತೀರ್ಮಾನಿಸಲಾಗಿದೆ. ಈ ಹುದ್ದೆಯಲ್ಲಿ ಸೇವೆ ಸಲ್ಲಿಸಲು ಇಚ್ಚಿಸುವ, ಸೇವಾ ವಿಷಯಗಳಲ್ಲಿ ನುರಿತ ಹಾಗೂ ಹೆಚ್ಚಿನ ಅನುಭವವುಳ್ಳ ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರನ್ನು ನೇಮಕ ಮಾಡಿಕೊಳ್ಳಲು ನಿರ್ಧರಿಸಲಾಗಿದ್ದು, ವಿವರಗಳು ಈ ಕೆಳಕಂಡಂತಿರುತ್ತವೆ.

1) ಸದರಿಯವರ ಸಂಭಾವನೆಯನ್ನು ಮಾಹೆಯಾನ ₹.1,15,000/-ಗಳಿಗೆ ಹಾಗೂ ವಾಹನ ಭತ್ಯೆಯನ್ನು ಮಾಹೆಯಾನ ₹.35,000/-ಗಳಿಗೆ ನಿಗದಿಪಡಿಸಲಾಗಿದೆ.

2) ಸದರಿಯವರ ಸೇವೆಯನ್ನು 02 ವರ್ಷಗಳ ಅವಧಿಗೆ ನೇಮಕ ಮಾಡಲಾಗುತ್ತಿದ್ದು, 01 ವರ್ಷದ ನಂತರ ಅವರ ಕಾರ್ಯನಿರ್ವಹಣೆಯ ಆಧಾರದ ಮೇಲೆ ನಂತರದ ಮುಂದಿನ 01 ವರ್ಷದವರೆಗೆ ಮುಂದುವರೆಸಲಾಗುವುದು.

3) 1958ರ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳಲ್ಲಿ ಸ್ಪಷ್ಟೀಕರಿಸಿರುವಂತೆ ಸದರಿ ಹುದ್ದೆಯಲ್ಲಿ ಕಾರ್ಯ ನಿರ್ವಹಿಸುವ ನಿವೃತ್ತ ಸರ್ಕಾರಿ ನೌಕರರಿಗೆ ಲಭ್ಯವಾಗುವ ರಜಾ ಸೌಲಭ್ಯಗಳು ಸದರಿಯವರಿಗೂ ಅನ್ವಯವಾಗುತ್ತದೆ.

## ಕಾನೂನು ಸಲಹೆಗಾರರ ಕರ್ತವ್ಯಗಳು ಹಾಗೂ ನಿಬಂಧನೆಗಳು ಈ ಕೆಳಕಂಡಂತಿರುತ್ತವೆ

**ಕರ್ತವ್ಯಗಳು:-**

1) The Legal Cell in the office of the Commission is headed by the Legal Adviser in Legal Cell who is a retired District ant Session Judge to deal with all legal matters pertaining to recruitments and examination of the Commission.

2) To give legal opinion regarding matters pertaining to the role and functioning of the Commission and all issues are pertaining to litigation/ service matters etc.

3) To interpret laws, statues, rules, regulations and to furnish opinion, in consulted matters.

4) To prepare pleadings in cases filed by and against the Commission before Legal Fora.

5) To give advice and instructions to the Standing Counsel of the Commission in pending cases.

6) The Legal Adviser is primarily responsible for issue of authorization letters and scrutiny of para wise remarks, draft statement of objections/written statements for the approval of the Secretary of the Commission.

7) The other important function is to monitor pending litigations against the office of the Commission, securing copies of Judgments and forwarding the same to the concerned Branches/ Sections with appropriate legal action to be taken.

8) He/She is also required to offer his/her legal opinion as to whether an appeal should be preferred or otherwise. He/She will also assist the Commission on any issue which requires legal advice.

9) The Legal Adviser will also assist the Commission as and when required in any matter of concern.

**ನಿಬಂಧನೆಗಳು/ ಷರತ್ತುಗಳು:–**

1. ಸದರಿಯವರು ಕಛೇರಿಯ ಅವಧಿಯಲ್ಲಿ ಕರ್ತವ್ಯಕ್ಕೆ ಹಾಜರಿರಬೇಕು ಹಾಗೂ ಆಯೋಗದ ಮಾನ್ಯ ಅಧ್ಯಕ್ಷರು, ಸದಸ್ಯರುಗಳು ಹಾಗೂ ಕಾರ್ಯದರ್ಶಿಯವರೊಂದಿಗೆ ಸಮಾಲೋಚನೆಗೆ ಲಭ್ಯವಿರತಕ್ಕದ್ದು.

2. ಕಛೇರಿ ವ್ಯವಹಾರಗಳಿಗೆ ಸಂಬಂಧಿಸಿದಂತೆ ಕಾರ್ಯದರ್ಶಿಯಿಂದ ಬರುವ ಯಾವುದೇ ಕಡತಗಳಿಗೆ ಕಾನೂನು ಸಲಹೆ ನೀಡತಕ್ಕದ್ದು.

3. ಆಯೋಗದಿಂದ ಹೂಡಲ್ಪಟ್ಟ ಅಥವಾ ಆಯೋಗದ ವಿರುದ್ಧದ ಎಲ್ಲ ಪ್ರಕರಣಗಳ ಸಂಕ್ಷಿಪ್ತ ಟಿಪ್ಪಣಿ ತಯಾರಿಸುವುದು ಹಾಗೂ ಅವುಗಳ ವಿಶ್ಲೇಷಣೆಯನ್ನು ಕಾಲಕಾಲಕ್ಕೆ ಕಾರ್ಯದರ್ಶಿಯವರಿಗೆ ಮಂಡಿಸತಕ್ಕದ್ದು.

4. ಆಯೋಗದ ವಿರುದ್ಧದ ಅಥವಾ ಆಯೋಗದ ಹಿತಾಸಕ್ತಿಗೆ ಧಕ್ಕೆ ಬರುವಂತಹ ಯಾವುದೇ ಪ್ರಕರಣದ ಯಾವುದೇ ಖಾಸಗಿ ವ್ಯಕ್ತಿಗಳಿಗೆ ಮಾರ್ಗದರ್ಶನ ನೀಡಬಾರದು.

5. ಕಾಲಕಾಲಕ್ಕೆ ಅವರಿಗೆ ವಹಿಸಲಾಗುವ ಕಾನೂನು ಪ್ರಕರಣ ಅಥವಾ ಕಾನೂನಿಗೆ ಸಂಬಂಧಿಸಿದ ಇತರ ತೊಡಕುಗಳ ನಿವಾರಣೆಯಲ್ಲಿ ಸಹಕರಿಸತಕ್ಕದ್ದು.

6. ಅವರಿಗೆ ವಹಿಸಲಾದ ಪ್ರಕರಣಗಳಿಗೆ ಸಂಬಂಧಿಸಿದಂತೆ ಆಯೋಗವನ್ನು ಪ್ರತಿನಿಧಿಸುವ ವಕೀಲರುಗಳ ಮಾರ್ಗದರ್ಶನ/ ಮೇಲ್ವಿಚಾರಣೆ ನಡೆಸಿ ಕಾರ್ಯದರ್ಶಿಯವರಿಗೆ ವರದಿ ಸಲ್ಲಿಸತಕ್ಕದ್ದು.

7. ಸದರಿಯವರು ಆಯೋಗವು ತಮಗೆ ನೀಡಲಾದ ಸಿಬ್ಬಂದಿ ವರ್ಗದವರ ಸಹಯೋಗದೊಂದಿಗೆ ಕಾನೂನು ಕೋಶದ ಸುಗಮ ನಿರ್ವಹಣೆಗಾಗಿ ಸಂಪೂರ್ಣ ಜವಾಬ್ದಾರಿ ಹೊರತಕ್ಕದ್ದು.

8. ದಿನಾಂಕ:01–11–2023ಕ್ಕೆ 65 ವರ್ಷ ಮೀರದ ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಅರ್ಜಿ ಸಲ್ಲಿಸತಕ್ಕದ್ದು.

9. ಆಯ್ಕೆ ಅಧಿಸೂಚನೆ ಹೊರಡಿಸಲ್ಪಟ್ಟು, ನೇಮಕಾತಿ ಆದೇಶ ತಲುಪಿದ 07 ದಿನಗಳೊಳಗೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು.

10. ಸದರಿಯವರ ಅವಧಿ ಮುಗಿಯುವ 01 ತಿಂಗಳ ಮೊದಲು ನೋಟೀಸ್ ನೀಡುವ ಮೂಲಕ ಬಿಡುಗಡೆಗೊಳ್ಳಬಹುದು ಅಥವಾ ಆಯೋಗದಿಂದ ಬಿಡುಗಡೆ ಮಾಡಬಹುದು.

11. ಅವಧಿ ಮುಗಿಯುವ 01 ತಿಂಗಳ ಮೊದಲು ನೋಟೀಸ್ ನೀಡದ ಸಂದರ್ಭದಲ್ಲಿ ಹಾಗೂ ತಕ್ಷಣವೇ ಬಿಡುಗಡೆಗೊಳಿಸುವಂತೆ ಕೋರಿದ ಸಂದರ್ಭದಲ್ಲಿ 01 ತಿಂಗಳ ವೇತನವನ್ನು ಬಿಟ್ಟು ಕೊಡತಕ್ಕದ್ದು.

12. ಸದರಿ ಹುದ್ದೆಯಲ್ಲಿ ಸೇವೆ ಸಲ್ಲಿಸಲು ಇಚ್ಚಿಸುವವರು ಹಿಂದಿನ ಸೇವೆಯಿಂದ ವಜಾಗೊಂಡಿರಬಾರದು ಹಾಗೂ ಯಾವುದೇ ಇಲಾಖಾ ವಿಚಾರಣೆ/ ಶಿಸ್ತುಕ್ರಮಗಳಿಂದ ಹೊರತಾಗಿರಬೇಕು.

ಆದ್ದರಿಂದ ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಸೇವಾ ವಿಷಯಗಳಲ್ಲಿ ನುರಿತ ಹಾಗೂ ಹೆಚ್ಚಿನ ಅನುಭವ ಹಾಗೂ ಮಾಹಿತಿ ಉಳ್ಳ ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಿಂದ ಅರ್ಜಿಯನ್ನು ಆಹ್ವಾನಿಸುತ್ತಿದ್ದು, ಆಸಕ್ತರು ಅರ್ಜಿಯೊಂದಿಗೆ ತಮ್ಮ ಹೆಸರು, ವಿಳಾಸ, ಜನ್ಮ ದಿನಾಂಕ, ವಿದ್ಯಾರ್ಹತೆ, ಸೇವಾ ವಿವರಗಳನ್ನೊಳಗೊಂಡ ಸಂಪೂರ್ಣ ಮಾಹಿತಿ (Curriculum vitae)ಯನ್ನು ಲಗತ್ತಿಸಿ ಅಧಿಸೂಚನೆ ಹೊರಡಿಸಿದ 15 ದಿನಗಳೊಳಗೆ **'ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು'** ಈ ವಿಳಾಸಕ್ಕೆ ಸಲ್ಲಿಸಲು ಸೂಚಿಸಿದೆ.

ಆಯೋಗದ ಆದೇಶದ ಮೇರೆಗೆ,

ಸಹಿ/–
**(ಕೆ.ಎಸ್. ಲತಾ ಕುಮಾರಿ)**
ಕಾರ್ಯದರ್ಶಿ,
ಕರ್ನಾಟಕ ಲೋಕಸೇವಾ ಆಯೋಗ.

**ಪ್ರತಿಗಳು:–**

1) ಮಾನ್ಯ ಅಧ್ಯಕ್ಷರ ಅವಗಾಹನೆಗಾಗಿ,
2) ಮಾನ್ಯ ಸದಸ್ಯರುಗಳ ಅವಗಾಹನೆಗಾಗಿ,
3) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು,
4) ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು,
5) ಕಾರ್ಯದರ್ಶಿ/ಪರೀಕ್ಷಾ ನಿಯಂತ್ರಕರ ಆಪ್ತ ಸಹಾಯಕರುಗಳಿಗೆ,
6) ಆಯೋಗದ ಎಲ್ಲಾ ಉಪ ಕಾರ್ಯದರ್ಶಿಗಳು/ಸಹಾಯಕ ಕಾರ್ಯದರ್ಶಿಗಳು/ ಶಾಖಾಧಿಕಾರಿಗಳಿಗೆ,
7) ಕಡತ ಪ್ರತಿ.